3. ವರದಿಗಳನ್ನೊಪಿಸುವುದು

ಶ್ರೀ ಆರ್. ನರೇಂದ್ರ:– ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಮಿತಿಯ ಸದಸ್ಯನಾದ ನಾನು ಅಧ್ಯಕ್ಷರ ಪರವಾಗಿ 2013–14ನೇ ಸಮಿತಿಯಿಂದ ಅಂಗೀಕರಿಸಲ್ಪಟ್ಟ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರ ಪಂಚಾಯತ್ ರಾಜ್ ಸಂಸ್ಥೆಗಳ 2007–08ನೇ ಸಾಲಿನ ಖಂಡಿಕೆ 2.7ಕ್ಕೆ ಸಂಬಂಧಿಸಿದಂತೆ ತಯಾರಿಸಲಾದ ಅನುಪಾಲನಾ ವರದಿ ಹಾಗೂ ಪ್ರಸಕ್ತ ಸಾಲಿನ ವಸತಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಪಶುಪಾಲನ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಗಳ ಪ್ರಮುಖ ಯೋಜನೆಯ ಕಾರ್ಯಕ್ರಮಗಳ ಮೇಲಿನ ಚರ್ಚೆಯ ಮೇಲೆ ಸಮಿತಿಯ ಶಿಫಾರಸ್ಸುಗಳನ್ನು ಒಳಗೊಂಡ 6ನೇ ವರದಿಯನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ (ಅಧ್ಯಕ್ಷರು, ಅಂದಾಜುಗಳ ಸಮಿತಿ):– ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಸಭೆಯ ಅಂದಾಜುಗಳ ಸಮಿತಿಯ ಅಧ್ಯಕ್ಷನಾದ ನಾನು 2013–14ನೇ ಸಾಲಿನ ಅಂದಾಜುಗಳ ಸಮಿತಿಯಿಂದ ಅಂಗೀಕರಿಸಲ್ಪಟ್ಟ ಜಲಸಂಪನ್ಮೂಲ ಇಲಾಖೆಗೆ ಸಂಬಂಧಿಸಿದಂತೆ ಅದರ ಎರಡನೇ ವರದಿಯನ್ನು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗೆ ಸಂಬಂಧಿಸಿದಂತೆ ಅದರ ಮೂರನೇ ವರದಿಯನ್ನು ಸದನದಲ್ಲಿ ಮಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಗಿದೆ.